ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಜಂ.ಆ/ಯ.ವ/ಆ.ಅ/ 576 /2012–13.

ಜಂಟಿ ಆಯುಕ್ತರವರ ಕಛೇರಿ
ಯಲಹಂಕ ವಲಯ ,ಬೃ.ಬೆಂ.ಮ.ಪಾ.
ಬೆಂಗಳೂರು –92 ದಿನಾಂಕ: 13.12.2012

ಆಡಳಿತಾತ್ಮಕ ಅನುಮೋದನೆ

ವಿಷಯ:– **Providing Cement Concrete Road and Drains at Srinivasapura Colony in Ward No. 05, Byatarayanapura Sub Division.**

ಉಲ್ಲೇಖ: ದಿನಾಂಕ: 19–10–2011 ರಂದು ನಡೆದ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿ ಸಭೆಯ ನಡವಳಿಗಳ ವಿಷಯದ ಸಂಖ್ಯೆ: 177/2011–12

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ವಿಭಾಗ) ರವರು **2012–13 ನೇ ಸಾಲಿನ ಕೆ.ಪಿ.ಡಬ್ಲ್ಯೂ.ಡಿ. ಎಸ್.ಆರ್,** ದರಪಟ್ಟಿಯನ್ವಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯಕ್ಕೆ **2012–13ನೇ ಸಾಲಿನ ಶೇ. 22.75%** ಅನುದಾನದಡಿಯಲ್ಲಿ (P1848) ಮೇಲ್ಕಂಡ ಕಾಮಗಾರಿಯನ್ನು ಕೈಗೊಳ್ಳಲು **ರೂ,12.00ಲಕ್ಷಗಳಿಗೆ** ಅಂದಾಜು ಪಟ್ಟಿಯನ್ನು ತಯಾರಿಸಿ ಆಡಳಿತಾತ್ಮಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಉಲ್ಲೇಖ (1) ರಂತೆ ಸಾಮಾಜಿಕ ನ್ಯಾಯ ಸಮಿತಿಯವರು ಸದರಿ ಕಾಮಗಾರಿಗೆ ಅನುಮೋದನೆ ನೀಡಿದ್ದು, ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2010–11 ದಿನಾಂಕ:27–07–2011 ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ ಹಾಗೂ ಆಡಳಿತಾತ್ಮಕ ಅನುಮೋದನೆ ಪುಸ್ತಕ ಪುಟ ಸಂಖ್ಯೆ 176 ಕ್ರ.ಸಂ 576 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ಅಂದಾಜು ಪಟ್ಟಿಯ ಮೊತ್ತ ರೂ 2.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ಧಗೊಳಿಸುವುದು.
3. ಧರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ಧರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
4. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
5. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
6. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
7. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
8. ಬಿ.ಎಂ./ಬಿ.ಸಿ. ಅಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.
9. ಸದರಿ ಕೆಲಸವು ಎಂಬ್ಯಾಕ್ ಮೆಂಟ್/ಕಾಂಕ್ರೀಟ್/ಡಾಂಬರೀಕರಣ–ಬಿಎಂ–ಬಿಸಿ /WMM-WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.

13/12/12

ಜಂಟಿ ಆಯುಕ್ತರು,
ಯಲಹಂಕ ವಲಯ
ಬಿ.ಬಿ.ಎಂ.ಪಿ ಬೆಂಗಳೂರು–92

ಪ್ರತಿಯನ್ನು:

1. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ.
2. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರಿಗೆ, ಸೂಕ್ತ ಕ್ರಮಕ್ಕಾಗಿ.
3. ಸಹಾಯಕ ಹಣಕಾಸು ನಿಯಂತ್ರಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
4. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.